**Akashvani : Bangalore**
**National Bulletins In Kannada**
**12.09.2025 / 19.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ’ಜ್ಞಾನ ಭಾರತಂ’ ಪೋರ್ಟಲ್ ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ

೨. ಎಂಟನೇ ರಾಷ್ಟ್ರೀಯ ಪೋಷಣ್ ಮಾಸಿಕಕ್ಕೆ ಪುದುಚೇರಿಯಲ್ಲಿ ಇಂದು ಚಾಲನೆ

೩. ನಾಳೆಯಿಂದ ಮಣಿಪುರ ಸೇರಿ ಐದು ರಾಜ್ಯಗಳಿಗೆ ಪ್ರಧಾನಿ ಭೇಟಿ

೪. ಹಾಂಗ್‌ಕಾಂಗ್ ಓಪನ್ ಬ್ಯಾಡ್ಮಿಂಟನ್: ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಸೆಮಿಫೈನಲ್ ಪ್ರವೇಶಿಸಿದ ಭಾರತದ ಲಕ್ಷ್ಯ ಸೇನ್

><><><><><><><

’ಜ್ಞಾನ ಭಾರತಂ’ ಮಿಷನ್ ಭಾರತದ ಸಂಸ್ಕೃತಿ, ಸಾಹಿತ್ಯ ಮತ್ತು ಪ್ರಜ್ಞೆಯ ಧ್ವನಿಯಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಜ್ಞಾನ ಭಾರತಂ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಭಾರತವು ಸುಮಾರು ಒಂದು ಕೋಟಿ ಹಸ್ತಪ್ರತಿಗಳ ವಿಶ್ವದ ಅತಿದೊಡ್ಡ ಸಂಗ್ರಹವನ್ನು ಹೊಂದಿದೆ ಎಂದರು. ಇತಿಹಾಸದುದ್ದಕ್ಕೂ, ಕೋಟ್ಯಂತರ ಹಸ್ತಪ್ರತಿಗಳು ನಾಶವಾಗಿವೆ. ಆದರೆ ಉಳಿದಿರುವ ಹಸ್ತಪ್ರತಿಗಳು ಪೂರ್ವಜರು ಜ್ಞಾನ, ವಿಜ್ಞಾನ ಮತ್ತು ಕಲಿಕೆಗೆ ಎಷ್ಟು ಸಮರ್ಪಿತರಾಗಿದ್ದರು ಎಂಬುದನ್ನು ತೋರಿಸುತ್ತವೆ. ಭಾರತವು ತನ್ನ ಆಲೋಚನೆಗಳು, ಆದರ್ಶಗಳು ಮತ್ತು ಮೌಲ್ಯಗಳಿಂದ ರೂಪುಗೊಂಡ ಜೀವಂತ ಪ್ರವಾಹವಾಗಿದೆ ಎಂದು ಪ್ರಧಾನಿ ಹೇಳಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( 25 ಸೆಕೆಂಡುಗಳು)**

ಇದೇ ವೇಳೆ ಪ್ರಧಾನಿ ಮೋದಿ ಅವರು ಜ್ಞಾನ ಭಾರತಂ ಪೋರ್ಟಲ್ ಅನ್ನು ಲೋಕಾರ್ಪಣೆಗೊಳಿಸಿದರು. ಇದು ಹಸ್ತಪ್ರತಿಗಳ ಡಿಜಿಟಲೀಕರಣ, ಸಂರಕ್ಷಣೆ ಹಾಗೂ ಸಾರ್ವಜನಿಕ ಪ್ರವೇಶವನ್ನು ಸುಗಮಗೊಳಿಸಲು ಮೀಸಲಾಗಿರುವ ಡಿಜಿಟಲ್ ವೇದಿಕೆಯಾಗಿದೆ.

><><><><><><><

ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಭಾರತದ ೧೫ನೇ ಉಪರಾಷ್ಟ್ರಪತಿಯಾಗಿ ಸಿ.ಪಿ.ರಾಧಾಕೃಷ್ಣನ್ ಇಂದು ಪ್ರಮಾಣವಚನ ಸ್ವೀಕರಿಸಿದರು. ರಾ?ಪತಿ ದ್ರೌಪದಿ ಮುರ್ಮು ಅವರು ಸಿ.ಪಿ.ರಾಧಾಕೃಷ್ಣನ್ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಪ್ರಮಾಣ ವಚನ ಸ್ವೀಕರಿಸಿದ ನಂತರ, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ರಾಜ್‌ಘಾಟ್‌ನಲ್ಲಿ ಮಹಾತ್ಮ ಗಾಂಧಿಯವರ ಸಮಾಧಿಗೆ ಪುಷ್ಪ ನಮನ ಸಲ್ಲಿಸಿದರು. ಬಳಿಕ ಸದೈವ್ ಅಟಲ್‌ನಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಸಮಾಧಿಗೆ ಗೌರವ ಸಲ್ಲಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ನೂತನ ಉಪರಾಷ್ಟ್ರಪತಿ ಸಿಪಿ ರಾಧಾಕೃಷ್ಣನ್ ಅವರಿಗೆ ಶುಭ ಹಾರೈಸಿದರು. ರಾಧಾಕೃಷ್ಣನ್ ಅವರು ಸಮರ್ಪಿತ ಸಾರ್ವಜನಿಕ ಸೇವಕ. ಅವರು ತಮ್ಮ ಜೀವನವನ್ನು ರಾಷ್ಟ್ರ ನಿರ್ಮಾಣ, ಸಾಮಾಜಿಕ ಸೇವೆ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳನ್ನು ಬಲಪಡಿಸಲು ಮುಡಿಪಾಗಿಟ್ಟಿದ್ದಾರೆ ಎಂದು ಪ್ರಧಾನಿ ಮೋದಿ ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಈ ತಿಂಗಳ ೯ ರಂದು ನಡೆದ ಉಪರಾಷ್ಟ್ರಪತಿ ಚುನಾವಣೆಯಲ್ಲಿ ರಾಧಾಕೃಷ್ಣನ್ ವಿಜಯಶಾಲಿಯಾಗಿದ್ದರು. ಅವರು ನಿನ್ನೆ ಮಹಾರಾಷ್ಟ್ರ ರಾಜ್ಯಪಾಲ ಹುದ್ದೆಗೆ ಔಪಚಾರಿಕವಾಗಿ ರಾಜೀನಾಮೆ ನೀಡಿದರು.

><><><><><><

೮ನೇ ರಾಷ್ಟ್ರೀಯ ಪೋಷಣ್ ಮಾಸಿಕವನ್ನು ಇಂದು ಪುದುಚೇರಿಯಲ್ಲಿ ಉದ್ಘಾಟಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪುದುಚೇರಿ ಲೆಫ್ಟಿನೆಂಟ್ ಗವರ್ನರ್ ಕೆ.ಕೈಲಾಶ್‌ನಾಥನ್, ಆರೋಗ್ಯಕರ ಮತ್ತು ಅಭಿವೃದ್ಧಿ ಹೊಂದಿದ ಭಾರತಕ್ಕೆ ಉತ್ತಮ ಪೌಷ್ಟಿಕಾಂಶ ಅಡಿಪಾಯವಾಗಿದೆ ಎಂದು ಹೇಳಿದರು. ಬೊಜ್ಜು, ಮಧುಮೇಹ ಮತ್ತು ಅಧಿಕ ರಕ್ತದೊತ್ತಡದಂತಹ ಜೀವನಶೈಲಿಯ ಕಾಯಿಲೆಗಳನ್ನು ತಡೆಗಟ್ಟಲು ಸಕ್ಕರೆ, ಉಪ್ಪು ಮತ್ತು ಅಡುಗೆ ಎಣ್ಣೆ ಸೇವನೆಯನ್ನು ಕಡಿಮೆ ಮಾಡಿ, ಸಮತೋಲಿತ ಆಹಾರ ಮತ್ತು ನಿಯಮಿತ ವ್ಯಾಯಾಮವನ್ನು ಅಳವಡಿಸಿಕೊಳ್ಳುವಂತೆ ಅವರು ಮನವಿ ಮಾಡಿದರು. ಪುದುಚೇರಿ ಮುಖ್ಯಮಂತ್ರಿ ಎನ್. ರಂಗಸಾಮಿ, ವಿಧಾನಸಭಾ ಸ್ಪೀಕರ್ ಆರ್. ಸೆಲ್ವಂ ಉಪಸ್ಥಿತರಿದ್ದರು.

><><><><><><

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆಯಿಂದ ಇದೇ ೧೫ ರವರೆಗೆ ಮಿಜೋರಾಂ, ಮಣಿಪುರ, ಅಸ್ಸಾಂ, ಪಶ್ಚಿಮ ಬಂಗಾಳ ಮತ್ತು ಬಿಹಾರಕ್ಕೆ ಭೇಟಿ ನೀಡಲಿದ್ದಾರೆ. ಮಿಜೋರಾಂ ಭೇಟಿಯ ಸಂದರ್ಭದಲ್ಲಿ, ಪ್ರಧಾನಿಯವರು ಒಂಬತ್ತು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಮಣಿಪುರ ಭೇಟಿಯ ಸಂದರ್ಭದಲ್ಲಿ ಅವರು ಎಂಟು ಸಾವಿರದ ಐದು ನೂರು ಕೋಟಿ

ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ.ಅಸ್ಸಾಂ ಭೇಟಿಯ ಸಂದರ್ಭದಲ್ಲಿ, ಪ್ರಧಾನಿ ಮೋದಿ ಅವರು ರಾಜಧಾನಿ ಗುವಾಹಟಿಯಲ್ಲಿ ಡಾ. ಭೂಪೇನ್ ಹಜಾರಿಕಾ ಅವರ ೧೦೦ನೇ ಜನ್ಮ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಅಲ್ಲದೇ ಹದಿನೆಂಟು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಪ್ರಮುಖ ಮೂಲಸೌಕರ್ಯ ಮತ್ತು ಕೈಗಾರಿಕಾ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ನೆರವೇರಿಸಲಿದ್ದಾರೆ. ಭೇಟಿಯ ಅಂತಿಮ ಚರಣದಲ್ಲಿ, ಪ್ರಧಾನಿಯವರು ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ ಮತ್ತು ಕೋಲ್ಕತ್ತಾದಲ್ಲಿ ೧೬ನೇ ಸಂಯೋಜಿತ ಕಮಾಂಡರ್‌ಗಳ ಸಮ್ಮೇಳನಕ್ಕೆ ಚಾಲನೆ ನೀಡಲಿದ್ದಾರೆ. ಬಳಿಕ ಪ್ರಧಾನಿ ಮೋದಿ ಅವರು ಬಿಹಾರಕ್ಕೆ ಭೇಟಿ ನೀಡಲಿದ್ದಾರೆ ಮತ್ತು ಪೂರ್ಣಿಯಾ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಇದೇ ವೇಳೆ ಅವರು ರಾಷ್ಟ್ರೀಯ ಮಖಾನಾ ಮಂಡಳಿಯನ್ನು ಸಹ ಉದ್ಘಾಟಿಸಲಿದ್ದಾರೆ ಹಾಗೂ ಪೂರ್ಣಿಯಾ ನಗರದಲ್ಲಿ ಸುಮಾರು ಮೂವತ್ತಾರು ಸಾವಿರ ಕೋಟಿ ರೂಪಾಯಿಗಳ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ನೆರವೇರಿಸಲಿದ್ದಾರೆ.

><><><><><><

ಈಶಾನ್ಯ ಭಾರತವು ಮುಂಚೂಣಿಯಲ್ಲಿ ಹೇಗೆ ಬೆಳೆಯುತ್ತಿದೆ ಎಂಬುದನ್ನು ವಿವರಿಸುವ ಲೇಖನವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಹಂಚಿಕೊಂಡಿದ್ದಾರೆ. ಬೈರಾಬಿ-ಸೈರಾಂಗ್ ರೈಲು ಮಾರ್ಗದ ಉದ್ಘಾಟನೆಯು ಐತಿಹಾಸಿಕ ಮೈಲಿಗಲ್ಲನ್ನು ಹೇಗೆ ಗುರುತಿಸುತ್ತದೆ ಎಂಬುದರ ಕುರಿತು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಲೇಖನವನ್ನು ಅವರು ಹಂಚಿಕೊಂಡಿದ್ದಾರೆ. ಈ ರೈಲು ಮಾರ್ಗವು ಮಿಜೋರಾಂ ಅನ್ನು ರಾಷ್ಟ್ರೀಯ ರೈಲ್ವೆ ಜಾಲಕ್ಕೆ ಸಂಪರ್ಕಿಸುತ್ತದೆ, ವ್ಯಾಪಾರ, ಸಂಪರ್ಕ ಮತ್ತು ಅವಕಾಶದ ಹೊಸ ಬಾಗಿಲುಗಳನ್ನು ತೆರೆಯುತ್ತದೆ. ಈಶಾನ್ಯ ಭಾರತವು ಇನ್ನು ಮುಂದೆ ಪ್ರಗತಿಗಾಗಿ ಕಾಯುತ್ತಿರುವ ಪ್ರದೇಶವಲ್ಲ. ಬದಲಾಗಿ ಭಾರತದ ಬೆಳವಣಿಗೆಯ ಕೇಂದ್ರವಾಗಿದೆ ಎಂದು ಲೇಖನದಲ್ಲಿ ಉಲ್ಲೇಖಿಸಲಾಗಿದೆ.

><><><><><><

ಮಾರಿಷಸ್ ಪ್ರಧಾನಿ ಡಾ. ನವೀನ್ ಚಂದ್ರ ರಾಮ್‌ಗುಲಂ ಅಯೋಧ್ಯೆಗೆ ಭೇಟಿ ನೀಡಿ, ಶ್ರೀರಾಮ ಮಂದಿರದಲ್ಲಿ ಪೂಜೆ ನೆರವೇರಿಸಿದರು. ಅಯೋಧ್ಯೆಗೆ ಆಗಮಿಸಿದ ಅವರಿಗೆ ಸಾಂಪ್ರದಾಯಿಕ ರೀತಿಯಲ್ಲಿ ಭವ್ಯ ಸ್ವಾಗತ ನೀಡಲಾಯಿತು. ಮಹರ್ಷಿ ವಾಲ್ಮೀಕಿ ವಿಮಾನ ನಿಲ್ದಾಣದಲ್ಲಿ

ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ರಾಜ್ಯ ಕೃಷಿ ಸಚಿವ ಸುರ್ಯಪ್ರತಾಪ್ ಶಾಹಿ, ಡಾ. ನವೀನ್ ಚಂದ್ರ ರಾಮ್‌ಗುಲಂ ಅವರಿಗೆ ಸ್ವಾಗತ ಕೋರಿದರು.

><><><><><><

ಭಾರತ-ನಾರ್ವೆ ಸಮುದ್ರ ಭದ್ರತೆ ಕುರಿತ ಸಂವಾದ ನಾರ್ವೆಯ ಓಸ್ಲೋದಲ್ಲಿ ನಡೆಯಿತು. ಅಂತಾರಾಷ್ಟ್ರೀಯ ಕಾನೂನಿನಂತೆ, ಆರ್ಥಿಕ ಬೆಳವಣಿಗೆಗೆ, ಕಡಲ ಶಾಂತಿ ಮತ್ತು ಪ್ರಗತಿಗೆ ಅನುಕೂಲವಾಗುವ ರೀತಿ ಸಮುದ್ರದಲ್ಲಿ ಭದ್ರತೆ ಹಾಗೂ ಸುರಕ್ಷತೆ ಕಾಯ್ದುಕೊಳ್ಳುವ ಮಾರ್ಗಗಳ ಕುರಿತು ಉಭಯ ಕಡೆಯವರು ಚರ್ಚಿಸಿದರು. ಸಮುದ್ರ ಕ್ಷೇತ್ರದಲ್ಲಿ ನಡೆಯುತ್ತಿರುವ ಸಹಕಾರದ ಉಪಕ್ರಮಗಳು ಹಾಗೂ ಸಮಗ್ರ ಸಮುದ್ರ ಭದ್ರತೆಗಾಗಿ ಅಂತಾರಾಷ್ಟ್ರೀಯ ಮತ್ತು ಪ್ರಾದೇಶಿಕ ಕಾರ್ಯವಿಧಾನಗಳನ್ನು ಬಲಪಡಿಸುವ ದಿಕ್ಕಿನಲ್ಲಿ ಭಾರತ ಮತ್ತು ನಾರ್ವೆ ಅವಕಾಶಗಳನ್ನು ಪರಿಶೀಲಿಸಿವೆ. ಅದೇ ರೀತಿ, ಅಕ್ರಮ ಸಮುದ್ರ ಚಟುವಟಿಕೆಗಳನ್ನು ತಡೆಯುವುದು ಮತ್ತು ಪ್ರಮುಖ ಸಮುದ್ರ ಮೂಲಸೌಕರ್ಯಗಳನ್ನು ರಕ್ಷಿಸುವಂಥ ಕ್ಷೇತ್ರಗಳಲ್ಲಿ ಸಹಕಾರ ಬಲಪಡಿಸಲು ಎರಡೂ ದೇಶಗಳು ಒಪ್ಪಿಕೊಂಡಿವೆ.

ಮುಂದಿನ ಸಂವಾದ ನವದೆಹಲಿಯಲ್ಲಿ ನಡೆಯಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

><><><><><><

ಹಾಂಗ್‌ಕಾಂಗ್ ಓಪನ್ ಬ್ಯಾಡ್ಮಿಂಟನ್‌ನ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಲಕ್ಷ್ಯ ಸೇನ್ ಸೆಮಿಫೈನಲ್ ಪ್ರವೇಶಿಸಿದ್ದಾರೆ. ಅವರು ಇಂದು ನಡೆದ ಕ್ವಾಟರ್‌ಪೈನಲ್ ಪಂದ್ಯಲ್ಲಿ ಭಾರತದವರೇ ಆದ ಆಯುಶ್ ಶೆಟ್ಟಿ ಅವರನ್ನು ೨೧-೧೬, ೧೭-೨೧ ಮತ್ತು ೨೧-೧೩ ಸೆಟ್‌ಗಳಿಂದ ಪರಾಭವಗೊಳಿಸಿದರು. ಇದೇ ವೇಳೆ, ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಸೆಮಿಫೈನಲ್ ಪ್ರವೇಶಿಸಿದೆ. ಭಾರತೀಯ ಜೋಡಿ ಇಂದು ನಡೆದ ಕ್ವಾಟರ್‌ಫೈನಲ್ ಪಂದ್ಯದಲ್ಲಿ ಮಲೇಷ್ಯಾದ ಜುನೈದಿ ಆರಿಫ್ ಮತ್ತು ರಾಯ್ ಕಿಂಗ್ ಯಾಪ್ ಜೋಡಿಯನ್ನು ೨೧-೧೪, ೨೦-೨೨, ೨೧-೧೬ ಸೆಟ್‌ಗಳ ಅಂತರದಲ್ಲಿ ಸೋಲಿಸಿ, ಅಂತಿಮ ನಾಲ್ಕರ ಘಟ್ಟಕ್ಕೆ ಪ್ರವೇಶ ಪಡೆದಿದೆ.

><><><><><><

ನೇಪಾಳದ ಅಂತರಿಕ ಸರ್ಕಾರದ ಪ್ರಧಾನಮಂತ್ರಿ ನೇಮಕಕ್ಕೆ ಸಂಬಂಧಿಸಿದಂತೆ ಜೆನ್ ಜ್ಹಿ ಪ್ರತಿನಿಧಿಗಳು, ನೇಪಾಳ ಸೇನೆ ಮುಖ್ಯಸ್ಥ ಆಶಿಕ್ ರಾಜ್ ಸಿಗ್ದೆಲ್ ಮತ್ತು ರಾಷ್ಟ್ರಪತಿ ರಾಮಚಂದ್ರ ಪೌಡೆಲ್ ನಡುವಿನ ಮಾತುಕತೆ ಎರಡು ದಿನಗಳ ಕಾಲ ನಡೆದರೂ ಕೂಡ ಯಾವುದೇ ಅಂತಿಮ

ನಿರ್ಧಾರಕ್ಕೆ ಬರಲಾಗಿಲ್ಲ. ನಿನ್ನೆ ರಾತ್ರಿ ರಾಷ್ಟ್ರಪತಿ ಮತ್ತು ಸಭಾಧ್ಯಕ್ಷ ದೇವರಾಜ್ ಘಿಮಿರೆ ಭೇಟಿಯಾಗಿ, ಇತ್ತೀಚಿನ ರಾಜಕೀಯ ಸಂದಿಗ್ಧತೆಯ ನಡುವೆ ಸಂವಿಧಾನಿಕ ಪರಿಧಿಯೊಳಗಿನ ಮಾರ್ಗಗಳನ್ನು ಹುಡುಕಬೇಕೆಂಬ ಅಗತ್ಯತೆಯನ್ನು ಪ್ರತಿಪಾದಿಸಿದರು. ಸಂಸತ್ತನ್ನು ವಿಸರ್ಜಿಸಬೇಕೆ ಅಥವಾ ಉಳಿಸಬೇಕೆಂಬ ಮಹತ್ವದ ವಿಷಯದ ಚರ್ಚೆ ಸಹ ನಡೆದರೂ ಒಮ್ಮತಕ್ಕೆ ಬರಲಾಗಿಲ್ಲ.

><><><><><><><